### 99. ಎಸ್‌ಸಿ, ಎಸ್‌ಟಿ ಅಭಿವೃದ್ಧಿಗೆ ರೂ.27 ಸಾವಿರ ಕೋಟಿ

ರಾಜ್ಯದಲ್ಲಿ ಎಸ್‌ಸಿ, ಎಸ್‌ಟಿ ಸಮುದಾಯದವರ ಅಭಿವೃದ್ಧಿಗಾಗಿ ರೂ.27.699 ಕೋಟಿ ಮೀಸಲಿಟ್ಟಿದ್ದು, ವಿವಿಧ ಯೋಜನೆಗಳನ್ನು ರೂಪಿಸಲಾಗಿದೆ. ಶಿಕ್ಷಣ ಕ್ಷೇತ್ರದ ಅಭಿವೃದ್ಧಿಯೇ ಸರ್ಕಾರದ ಗುರಿ ಎಂದು ಉಪ ಮುಖ್ಯಮಂತ್ರಿ ಗೋವಿಂದ ಎಂ.ಕಾರಜೋಳ ತಿಳಿಸಿದರು. ತಾಲ್ಲೂಕಿನಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಭವನ ಮತ್ತು ಸರ್ಕಾರಿ ಮೆಟ್ರಿಕ್ ನಂತರದ ಬಾಲಕ, ಬಾಲಕಿಯರ ವಿದ್ಯಾರ್ಥಿನಿಲಯಗಳು ಮತ್ತು ವಸತಿ ಶಾಲೆಗಳ ನೂತನ ಕಟ್ಟಡಗಳ ಉದ್ಘಾಟನೆ ಮತ್ತು ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ, ಜಿಲ್ಲಾಮಟ್ಟದ ವನಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿ, ಪಾವಗಡದಲ್ಲಿ ಸುಮಾರು ರೂ.88 ಕೋಟಿ ವೆಚ್ಚದಲ್ಲಿ ವಿದ್ಯಾರ್ಥಿನಿಲಯಗಳು, ಪಿಯು ಕಾಲೇಜು ಹಾಗೂ ಸೆಕೆಂಡರಿ ಸ್ಕೂಲ್ ಕಟ್ಟಡಗಳ ಉದ್ಘಾಟನೆಯಾಗಿದೆ. ಇದರಿಂದ ಎಸ್‌ಸಿ, ಎಸ್‌ಟಿ ಜನಾಂಗದ ಸುಮಾರು 1,600 ಮಕ್ಕಳಿಗೆ ಓದಲು ವ್ಯವಸ್ಥೆಯಾಗುತ್ತದೆ. ನಮ್ಮ ಸರ್ಕಾರದ ಗುರಿ ಶಿಕ್ಷಣಕ್ಕೆ ಪ್ರಥಮ ಆದ್ಯತೆ ನೀಡುವುದು ಯಾವುದೇ ವರ್ಗದ ಬಡ ಮಕ್ಕಳಿಗೆ ಓದಲು ಸರ್ಕಾರ ಹೆಚ್ಚಿನ ಅನುದಾನವನ್ನು ಬಜೆಟ್‌ನಲ್ಲಿ ನೀಡಿದ್ದಾರೆ. ಪ್ರಸಕ್ತ ಸಾಲಿನಲ್ಲಿ ರೂ. 27,559 ಕೋಟಿ ಅನುದಾನವನ್ನು ಎಸ್‌ಸಿ, ಎಸ್‌ಟಿ ಜನಾಂಗಕ್ಕೆ ವಿಶೇಷ ಹಂಚಿಕೆ ಮಾಡಲಾಗಿತ್ತು. 25,559 ಕೋಟಿಗಳಷ್ಟು ಖರ್ಚು ಮಾಡಿ ಶೇ. 92ರಷ್ಟು ಪ್ರಗತಿ ಸಾಧಿಸಿದ್ದೇವೆ ಎಂದರು. ಸಂಸದ ಎ.ನಾರಾಯಣಸ್ವಾಮಿ, ಶಾಸಕ ವೆಂಕಟರಮಣಪ್ಪ, ಮಾಜಿ ಶಾಸಕ ಸೋಮನಾಯಕ್, ಜಿ.ಪಂ.ಉಪಾಧ್ಯಕ್ಷರಾದ ಶಾರದಾ ನರಸಿಂಹಮೂರ್ತಿ, ಜಿಲ್ಲಾ ಪಂಚಾಯತ್ ಸದಸ್ಯರಾದ ಹೆಚ್.ವಿ.ವೆಂಕಟೇಶ್, ಜಿಲ್ಲಾಧಿಕಾರಿ ಡಾ. ಕೆ. ರಾಕೇಶ್‌ಕುಮಾರ್, ಜಿಲ್ಲಾ ಪಂಚಾಯತ್. ಸಿಇಒ ಶುಭಾಕಲ್ಯಾಣ್, ಪೊಲೀಸ್ ವರಿಷ್ಠಾಧಿಕಾರಿ ಡಾ.ಕೆ.ವಂಶಿಕೃಷ್ಣ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಹೆಚ್.ಎಸ್.ಪ್ರೇಮನಾಥ್ ಇತರರಿದ್ದರು.

ಆಧಾರ:ಸಂಯುಕ್ತ ಕರ್ನಾಟಕ, ದಿನಾಂಕ:06.06.2020